ಪಲ್ಲವಿ ಆಕುರಾತಿ, ಭಾ.ಆ.ಸೇ
ನಿರ್ದೇಶಕರು
ಸಮಗ್ರ ಮಕ್ಕಳ ರಕ್ಷಣಾ ಯೋಜನೆ

ದೂರವಾಣಿ ಸಂಖ್ಯೆ:080-22879381/82/83
C/o ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
2 ನೇ ಮಹಡಿ, ಡಾ. ಬಿ.ಆರ್. ಅಂಬೇಡ್ಕರ್ ವೀದಿ
ಬೆಂಗಳೂರು-560001
E-mail.id: icps.kar@gmail.com

(333)

ಸಂಖ್ಯೆ:ಕಸಮರಸೊ/ಐಇಸಿ/41A/2019-20 ದಿನಾಂಕ:14-10-2020

ಶ್ರೀ ಎಸ್.ಎಸ್.ನಕುಲ್,
ಜಿಲ್ಲಾಧಿಕಾರಿಗಳು,
ಬಳ್ಳಾರಿ ಜಿಲ್ಲೆ.

**ನೆನಪೋಲೆ-1**

ಮಾನ್ಯರೆ,

**ವಿಷಯ:** ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಪಿಟಿಷನ್ (ಸಿ) ನಂ.36/2009ಕ್ಕೆ ಸಂಬಂಧಿಸಿದಂತೆ ಹೊರಡಿಸಿರುವ ಆದೇಶದ ಕುರಿತು ಕೈಗೊಂಡಿರುವ ಕ್ರಮದ ಕುರಿತು.

**ಉಲ್ಲೇಖ:** 1. ರಿಟ್ ಪಿಟಿಷನ್ (ಸಿ) ನಂ.36/2009ಕ್ಕೆ ಸಂಬಂಧಿಸಿದಂತೆ ದಿನಾಂಕ:06/08/2010 ರಲ್ಲಿ ಹೊರಡಿಸಿರುವ ಆದೇಶ.

2. ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಪತ್ರದ DO No 1601/04/2016-child labour/NCPCR/104205 dt 04/11/2019.

3. ಕರಾಸಮರಸೊ/ಐಇಸಿ/41A/2019-20, ದಿನಾಂಕ:04-07-2020

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಪತ್ರದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಮಾರ್ಗಸೂಚಿಗಳನ್ನು ಹೊರಡಿಸಿದ ನಂತರವೂ ಹಲವು ರಾಜ್ಯಗಳಲ್ಲಿ ಮಕ್ಕಳು ಕೊಳವೆ ಬಾವಿ, ಬೋರ್‌ವೆಲ್ ಇತ್ಯಾದಿಗಳಲ್ಲಿ ಬೀಳುವ ಘಟನೆಗಳು ಹೆಚ್ಚುತ್ತಲಿವೆ. ಇದು ಮಾರ್ಗಸೂಚಿಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸದಿರುವುದನ್ನು ತೋರಿಸುತ್ತದೆ.

ಉಲ್ಲೇಖ (2)ರ ಪತ್ರದಲ್ಲಿ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ದಿ: 9/5/2016ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯ ಹಾಗೂ ಭಾರತ ಸರ್ಕಾರದ ಜಲ ಸಂಪನ್ಮೂಲ ಮಂತ್ರಾಲಯವು ಹೊರಡಿಸಿದ್ದ ಮಾರ್ಗಸೂಚಿಗಳನ್ನು ಎಲ್ಲಾ ರಾಜ್ಯದ ಮುಖ್ಯ ಕಾರ್ಯದರ್ಶಿಗಳಿಗೆ ಕಳುಹಿಸಿ ಅನುಪಾಲನೆ ಕೇಳಿರುತ್ತದೆ. ಈ ಹಿಂದೆ ರಾಜ್ಯಗಳಿಂದ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಕ್ಕೆ ನೀಡಲಾಗಿದ್ದ **"ಕೈಗೊಂಡ ಕ್ರಮಗಳ ವರದಿ (ATR)"** ಯಲ್ಲಿ, ಮಾನ್ಯ ಸರ್ವೋಚ್ಚ ನ್ಯಾಯಾಲಯ ಹಾಗೂ ಜಲ ಸಂಪನ್ಮೂಲ ಮಂತ್ರಾಲಯ ಹೊರಡಿಸಿದ್ದ ಮಾರ್ಗಸೂಚಿಗಳು ಕ್ರಮಬದ್ಧವಾಗಿ ಅನುಷ್ಠಾನವಾಗಿರುವ ಬಗ್ಗೆ ಖಾತ್ರಿಪಡಿಸಿರುವುದಿಲ್ಲ. ರಾಜ್ಯಗಳಿಂದ ಕೈಗೊಂಡ ಕ್ರಮಗಳ ವರದಿ **"(ATR)"** ಬಂದಿದ್ದಾಗ್ಯೂ ಮಕ್ಕಳು ಕೊಳವೆ ಬಾವಿಗೆ ಬೀಳುತ್ತಿರುವ ಪ್ರಕರಣಗಳು ಇನ್ನೂ ಹೆಚ್ಚುತ್ತಿವೆ ಎಂದು ತಿಳಿಸಿರುತ್ತಾರೆ.

ಉಲ್ಲೇಖ (3)ರ ಪತ್ರದಲ್ಲಿ ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಜಲ ಸಂಪನ್ಮೂಲ ಮಂತ್ರಾಲಯ ಹೊರಡಿಸಿದ್ದ ಮಾರ್ಗಸೂಚಿಯನ್ನು ಅನುಷ್ಠಾನವಾಗುತ್ತಿರುವ ಬಗ್ಗೆ ಅನುಪಾಲನೆ ಹಾಗೂ ಈ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ವರದಿಯನ್ನು ಒಂದು ವಾರದೊಳಗೆ ಸಲ್ಲಿಸಲು ಅಪರ ಮುಖ್ಯ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರವರು ಈಗಾಗಲೇ ಕೋರಿರುತ್ತಾರೆ. ಆದರೆ ಇಲ್ಲಿಯವರೆಗೆ ಯಾವುದೇ ವರದಿಗಳು ಕಛೇರಿಗೆ ಸ್ವೀಕೃತವಾಗಿರುವುದಿಲ್ಲ. ಆದುದರಿಂದ ಸದರಿ ವಿಷಯದ ವರದಿಯನ್ನು ತುರ್ತಾಗಿ ಸರ್ಕಾರಕ್ಕೆ ಸಲ್ಲಿಸಬೇಕಾಗಿರುವುದರಿಂದ ಜರೂರಾಗಿ ಪತ್ರಕ್ಕೆ ಲಗತ್ತಿಸಿರುವ ನಮೂನೆಯಲ್ಲಿ ವರದಿಯನ್ನು ಸಲ್ಲಿಸಲು ಕೋರಿದೆ. (**ನಮೂನೆ ಲಗತ್ತಿಸಿದೆ**).

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ,

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಬೆಂಗಳೂರು.